ಶ್ರೀ ಹೆಚ್. ಹಾಲಪ್ಪ (ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕರ ವ್ಯವಹಾರಗಳ ಸಚಿವರು):

ಅ) ಹೌದು.

ಆ) ಗ್ರಾಮಾಂತರ ಪ್ರದೇಶದಲ್ಲಿ ಅನಿಲ ರಹಿತ ಪಡಿತರ ಚೀಟಿಗಳ ಸಂಖ್ಯೆ ಹೆಚ್ಚಾಗಿರುವ ಕಾರಣ 3 ಲೀಟರ್ ಸೀಮೆಎಣ್ಣೆ ನೀಡಲಾಗುತ್ತಿದೆ.

ಇ) ಹೌದು.

ಈ) ಭಾರತ ಸರ್ಕಾರ ರಾಜ್ಯಕ್ಕೆ ಸೀಮೆಎಣ್ಣೆ ಪ್ರಮಾಣವನ್ನು ಹೆಚ್ಚಿಸಿದಲ್ಲಿ ಇದನ್ನು ಜಾರಿಗೆ ತರಲಾಗುವುದು. ಹೆಚ್ಚಿನ ಸೀಮೆಎಣ್ಣೆ ಹಂಚಿಕೆಗೆ ಸಂಬಂಧಪಟ್ಟ ಪ್ರಸ್ತಾವನೆ ಈಗಾಗಲೇ ಕೇಂದ್ರ ಸರ್ಕಾರಕ್ಕೆ ಸಲ್ಲಿಸಲಾಗಿದೆ.

245 ಶ್ರೀ ಪಾಟೀಲ್ ವಿ.ಎಸ್. (ಯಲ್ಲಾಪುರ): ಮಾನ್ಯ ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ;

ಅ) ಉತ್ತರ ಕನ್ನಡ ಜಿಲ್ಲೆಯಲ್ಲಿ ಬೆಳೆದ ಅಡಿಕೆ ಬೆಳೆಗೆ ಬೆಂಬಲ ಬೆಲೆ ಘೋಷಿಸುವ ಬಗ್ಗೆ ಸರ್ಕಾರದ ಮುಂದಿದೆಯೇ;

ಆ) ಮುಂಡಗೋಡ ತಾಲ್ಲೂಕು ಮಳಗಿ ಕೃಷಿ ಪಾಠಶಾಲೆಯನ್ನು ಮುಚ್ಚಿದ್ದರಿಂದ ಅಲ್ಲಿಯ ಸರ್ಕಾರದ ಆಸ್ತಿಯನ್ನು ತೋಟಗಾರಿಕಾ ವಿಶ್ವವಿದ್ಯಾಲಯದ ವ್ಯಾಪ್ತಿಗೆ ತೆಗೆದುಕೊಳ್ಳುವ ವಿಷಯವು ಸರ್ಕಾರದ ಪರಿಶೀಲನೆಯಲ್ಲಿದೆಯೇ?

ಶ್ರೀ ಉಮೇಶ್ ವಿ. ಕತ್ತಿ (ತೋಟಗಾರಿಕೆ ಮತ್ತು ಬಂದೀಖಾನೆ ಸಚಿವರು):

ಅ) ಹೌದು. ಕೆಂಪು ಅಡಿಕೆಯನ್ನು ಪ್ರತಿ ಕ್ವಿಂಟಾಲ್‌ಗೆ ರೂ. 9500ರಂತೆ ಖರೀದಿಸಲು ದಿನಾಂಕ 30.6.2009ರವರೆಗೆ ಮಂಜೂರಾತಿ ನೀಡಲಾಗಿದೆ.

ಆ) ಇಲ್ಲ.